## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ 2026-27ನೇ ಸಾಲಿನ ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿ ಸಮಾಲೋಚನೆ ಮೂಲಕ ವರ್ಗಾವಣೆ- ಪರಿಷ್ಕೃತ ವೇಳಾ ಪಟ್ಟಿ ಕುರಿತು.**

**ಓದಲಾಗಿದೆ :-**

1. ಸರ್ಕಾರದ ಆದೇಶ ಸಂಖ್ಯೆ : ಆಕುಕ 254 ಹೆಚ್‌ಎಸ್‌ಹೆಚ್ 2025 (ಭಾಗ-1), ದಿನಾಂಕ : 04/08/2025.
2. ಸರ್ಕಾರದ ಏಕ ಕಡತ ಸಂಖ್ಯೆ : ಆಕುಕ 254 ಹೆಚ್‌ಎಸ್‌ಹೆಚ್ 2025 (ಭಾಗ-1)ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯದ ಪ್ರಸ್ತಾವನೆ.

**ಪ್ರಸ್ತಾವನೆ :-**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಆದೇಶದಲ್ಲಿ, 2026ನೇ ಸಾಲಿಗೆ ಸಂಬಂಧಿಸಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು ಕರ್ನಾಟಕ ನಾಗರೀಕ ಸೇವಾ (ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು, 2025 ರಡಿ ಸಮಾಲೋಚನೆ ಮೂಲಕ ವರ್ಗಾವಣೆಯನ್ನು ನಿಗದಿತ ಕಾಲಾವಧಿಯೊಳಗಾಗಿ ಪೂರ್ಣಗೊಳಿಸಲು ಅನುವಾಗುವಂತೆ ಪೂರ್ವಸಿದ್ಧತೆಗಾಗಿ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ದಿನಾಂಕ : 31/12/2025ರಂದು ಇದ್ದಂತಹ ಸೇವಾ ಮಾಹಿತಿಯನ್ನು ಆಯಾಯಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಂದ ಕಲೆಹಾಕಲು ಹಾಗೂ ವರ್ಗಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಲು ವೇಳಾ ಪಟ್ಟಿಯನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ಏಕ ಕಡತದಲ್ಲಿ, ಕೆಲವು ಆಡಳಿತಾತ್ಮಕ ಕಾರಣಗಳಿಗಾಗಿ 2026-27ನೇ ಸಾಲಿನ ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು ಸಮಾಲೋಚನೆ ಮೂಲಕ ಕೈಗೊಳ್ಳಲು ಸರ್ಕಾರದ ದಿನಾಂಕ : 04/08/2025 ರ ಆದೇಶದಲ್ಲಿ ನಿಗದಿಪಡಿಸಲಾದ ವೇಳಾ ಪಟ್ಟಿಯನ್ನು ಪಾಲಿಸಲು ವಿಳಂಬವಾಗಿರುವುದಾಗಿ ತಿಳಿಸಿ, 2026-27ನೇ ಸಾಲಿನ ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು ಸಮಾಲೋಚನೆ ಮೂಲಕ ಕೈಗೊಳ್ಳಲು ಪರಿಷ್ಕೃತ ವೇಳಾಪಟ್ಟಿಯನ್ನು ನಿಗದಿಪಡಿಸುವಂತೆ ಕೋರಲಾಗಿರುತ್ತದೆ.

ಆದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಆಕುಕ 254 ಹೆಚ್‌ಎಸ್‌ಹೆಚ್ 2025 (ಭಾಗ-1),**
**ಬೆಂಗಳೂರು, ದಿನಾಂಕ : 15ನೇ ಏಪ್ರಿಲ್ 2026.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ 2026-27ನೇ ಸಾಲಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು ಕರ್ನಾಟಕ ನಾಗರೀಕ ಸೇವಾ (ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು, 2025 ರಡಿ ಸಮಾಲೋಚನೆ ಮೂಲಕ ವರ್ಗಾವಣೆಯ ವೇಳಾ ಪಟ್ಟಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

| ಕ್ರ. ಸಂ | ವಿಷಯ | ದಿನಾಂಕ ನಿಗಧಿ |
|---|---|---|
| 1 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರೈಸಿರುವ ಅಧಿಕಾರಿ/ಸಿಬ್ಬಂದಿಗಳ ಮಾಹಿತಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಆಯುಕ್ತಾಲಯಕ್ಕೆ ಸಲ್ಲಿಸುವ ದಿನಾಂಕ. | 01/01/2026 (ದಿನಾಂಕ : 31/12/2025ರಂದು ಇದ್ದಂತೆ) |
| 2 | ನಿಯಮ 6(3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ಅರ್ಜಿಗಳನ್ನು ಆಯುಕ್ತಾಲಯಕ್ಕೆ ಸಲ್ಲಿಸುವ ದಿನಾಂಕ | 01/01/2026 ರಿಂದ 15/01/2026 |

...2

Scanned with OKEN Scanner

| | | |
|---|---|---|
| 3 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರ್ಯೆಸಿರುವ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ | 15/04/2026 |
| 4 | ನಿಯಮ 6(3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ | 15/04/2026 |
| 5 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರ್ಯೆಸಿರುವ ಅಧಿಕಾರಿ/ಸಿಬ್ಬಂದಿಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ | 30/04/2026 |
| 6 | ನಿಯಮ 6(3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣ ಸಲ್ಲಿಸಲು ಕೊನೆಯ ದಿನಾಂಕ | 30/04/2026 |
| 7 | ನಿಯಮ 6(1) ರನ್ವಯ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾವಧಿ ಪೂರ್ಯೆಸಿರುವ ಅಧಿಕಾರಿ/ಸಿಬ್ಬಂದಿಗಳ ವರ್ಗಾವಣೆಗಳ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ | 15/05/2026 |
| 8 | ನಿಯಮ 6(3) ರನ್ವಯ ವಿಶೇಷ ವರ್ಗದ ಅಧಿಕಾರಿ/ಸಿಬ್ಬಂದಿಗಳ ಕೋರಿಕೆ ವರ್ಗಾವಣೆಗಳ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ | 15/05/2026 |
| 9 | ಆಯುಕ್ತಾಲಯ/ನಿರ್ದೇಶನಾಲಯದಲ್ಲಿ ಅಂತಿಮ ಪಟ್ಟಿಯಂತೆ ವೃಂದವಾರು ಸಮಾಲೋಚನೆಯನ್ನು ಪ್ರಾರಂಭಿಸುವ ದಿನಾಂಕ | 20/05/2026 ರಿಂದ ಮುಕ್ತಾಯವಾಗುವವರೆಗೆ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಪ್ರದೀಪ್ ಕುಮಾರ್ 15/4/26

**(ಪ್ರದೀಪ್ ಕುಮಾರ್ ಬಿ. ಎಸ್.,)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಸೇವೆಗಳು-1).

15/04/2026

**ಇವರಿಗೆ :-**

1. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.
4. ನಿರ್ದೇಶಕರು, KHDS, ಬೆಂಗಳೂರು – ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ರವರ ಮೂಲಕ ಜಾರಿಗೊಳಿಸುವುದು.
5. ಎಲ್ಲಾ ವಿಭಾಗದ ವಿಭಾಗೀಯ ಸಹ ನಿರ್ದೇಶಕರು – ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಮೂಲಕ.
6. ರಾಜ್ಯ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ/ಜಿಲ್ಲಾ ಶಸ್ತ್ರ ಚಿಕಿತ್ಸಕರು – ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಮೂಲಕ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಮಾಹಿತಿಗಾಗಿ ಪ್ರತಿ :-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
3. ಆಯುಕ್ತರು, ಆಯುಷ್ ನಿರ್ದೇಶನಾಲಯ, ಬೆಂಗಳೂರು.
4. ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ-1, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು.

Scanned with OKEN Scanner